**ಕರ್ನಾಟಕ ಸರ್ಕಾರ**

**ಸಮಾಜ ಕಲ್ಯಾಣ ಇಲಾಖೆ**

ಸಂಖ್ಯೆ:ಸಕಇ/ಪಪೂತಕೇ/ಎಸ್-5/ಸಿಆರ್-04/2021-22

ಮುಖ್ಯ ಆಡಳಿತಾಧಿಕಾರಿಗಳು,
ಪರೀಕ್ಷಾ ಪೂರ್ವತರಬೇತಿಕೇಂದ್ರ,
ಡಾ॥ ಬಿ.ಆರ್.ಅಂಬೇಡ್ಕರ್ ಭವನ
ವಸಂತನಗರ, ಬೆಂಗಳೂರು.
ದಿನಾಂಕ: 26.08.2022.

**ಅಧಿಸೂಚನೆ**

ವಿಷಯ: 2022-23ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ / ಹಿಂದುಳಿದ ವರ್ಗ ಮತ್ತು ಅಲ್ಪ ಸಂಖ್ಯಾತ ಅಭ್ಯರ್ಥಿಗಳಿಗೆ ಯು.ಪಿ.ಎಸ್.ಸಿ / ಕೆ.ಎ.ಎಸ್ / ಗ್ರೂಪ್-ಸಿ / ಬ್ಯಾಂಕಿಂಗ್ / ಎಸ್.ಎಸ್.ಸಿ / ಆರ್.ಆರ್.ಬಿ ಮತ್ತು ನ್ಯಾಯಾಂಗ ಸೇವಾ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಆಯ್ಕೆ ಮಾಡುವ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2022-23ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ / ಹಿಂದುಳಿದ ವರ್ಗ ಮತ್ತು ಅಲ್ಪ ಸಂಖ್ಯಾತ ಅಭ್ಯರ್ಥಿಗಳಿಗೆ ಯು.ಪಿ.ಎಸ್.ಸಿ / ಕೆ.ಎ.ಎಸ್ / ಗ್ರೂಪ್-ಸಿ / ಬ್ಯಾಂಕಿಂಗ್ / ಎಸ್.ಎಸ್.ಸಿ / ಆರ್.ಆರ್.ಬಿ ಮತ್ತು ನ್ಯಾಯಾಂಗ ಸೇವಾ ಪರೀಕ್ಷೆಗಳಿಗೆ ಪೂರ್ವಭಾವಿ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ಯು.ಪಿ.ಎಸ್.ಸಿ / ಕೆ.ಎ.ಎಸ್ / ಗ್ರೂಪ್-ಸಿ / ಬ್ಯಾಂಕಿಂಗ್ / ಎಸ್.ಎಸ್.ಸಿ / ಆರ್.ಆರ್.ಬಿ ಮತ್ತು ನ್ಯಾಯಾಂಗ ಸೇವಾ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ / ಹಿಂದುಳಿದ ವರ್ಗ ಮತ್ತು ಅಲ್ಪ ಸಂಖ್ಯಾತ ಅಭ್ಯರ್ಥಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ರವರ ಮೂಲಕ ಸಾಮಾನ್ಯ ಪ್ರವೇಶ ನಡೆಸಿ ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ನಿಗದಿತ ಗುರಿಗನುಗುಣವಾಗಿ ಆಯ್ಕೆ ಮಾಡಲಾಗುತ್ತದೆ. ಸದರಿ ಅಭ್ಯರ್ಥಿಗಳಿಗೆ ಶಿಷ್ಯವೇತನವನ್ನು ಸರ್ಕಾರದಿಂದ ಮಂಜೂರಾದ ದರದಲ್ಲಿ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗುವುದು ಮತ್ತು ತರಬೇತಿ ವೆಚ್ಚವನ್ನು ತರಬೇತಿ ಸಂಸ್ಥೆಗಳಿಗೆ ಪಾವತಿಸಲಾಗುವುದು.

ಯು.ಪಿ.ಎಸ್.ಸಿ / ಕೆ.ಎ.ಎಸ್ / ಗ್ರೂಪ್-ಸಿ / ಬ್ಯಾಂಕಿಂಗ್ / ಎಸ್.ಎಸ್.ಸಿ / ಆರ್.ಆರ್.ಬಿ ಮತ್ತು ನ್ಯಾಯಾಂಗ ಸೇವಾ ಪರೀಕ್ಷೆಗಳ ಪೂರ್ವಭಾವಿ ತರಬೇತಿಯ ಅವಧಿ, ಶೈಕ್ಷಣಿಕ ವಿದ್ಯಾರ್ಹತೆ, ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಕಂಡಂತಿದೆ.

<table>
<tr><th>ಕ್ರ.ಸಂ</th><th colspan="7">ವಿವರ</th></tr>
<tr><td>01</td><td>ಕೋರ್ಸ್‌ಗಳ ವಿವರ</td><td colspan="6">ಯು.ಪಿ.ಎಸ್.ಸಿ/ಕೆ.ಎ.ಎಸ್/ಬ್ಯಾಂಕಿಂಗ್/ಗ್ರೂಪ್-ಸಿ/ಎಸ್.ಎಸ್.ಸಿ ಮತ್ತು ಆರ್.ಆರ್.ಬಿ/ ನ್ಯಾಂಯಾಂಗ ಸೇವೆ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವಭಾವಿ ತರಬೇತಿ</td></tr>
<tr><td rowspan="2">02</td><td rowspan="2">ತರಬೇತಿ ಅವಧಿ (ತಿಂಗಳು)</td><td>ಯು.ಪಿ.ಎಸ್.ಸಿ</td><td>ಕೆ.ಎ.ಎಸ್</td><td>ಗ್ರೂಪ್-ಸಿ</td><td>ಬ್ಯಾಂಕಿಂಗ್</td><td>ಎಸ್.ಎಸ್.ಸಿ</td><td>ಆರ್.ಆರ್.ಬಿ</td></tr>
<tr><td>09 ತಿಂಗಳು</td><td>07 ತಿಂಗಳು</td><td>3 ತಿಂಗಳು</td><td>3 ತಿಂಗಳು</td><td>3 ತಿಂಗಳು</td><td>3 ತಿಂಗಳು</td></tr>
<tr><td>03</td><td>ವಯಸ್ಸು</td><td colspan="6">18 ರಿಂದ 40 ವರ್ಷ</td></tr>
<tr><td>04</td><td>ವಿದ್ಯಾರ್ಹತೆ</td><td colspan="6">ಯು.ಪಿ.ಎಸ್.ಸಿ<br>ಪದವಿಯಲ್ಲಿ ಶೇ.55 ಕ್ಕಿಂತ ಹೆಚ್ಚು ಅಂಕಗಳಿಸಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.<br>ಕೆ.ಎ.ಎಸ್/ಗ್ರೂಪ್-ಸಿ/ಬ್ಯಾಂಕಿಂಗ್/ಆರ್.ಆರ್.ಬಿ/ಎಸ್.ಎಸ್.ಸಿ<br>ಪದವಿಯಲ್ಲಿ ಶೇ.50 ಕ್ಕಿಂತ ಹೆಚ್ಚು ಅಂಕಗಳಿಸಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.<br>ನ್ಯಾಯಾಂಗ ಸೇವೆ<br>ಪದವಿಯಲ್ಲಿ ಶೇ.45 ಕ್ಕಿಂತ ಹೆಚ್ಚು ಅಂಕಗಳಿಸಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.</td></tr>
<tr><td>05</td><td>ಅಭ್ಯರ್ಥಿಯ ಸಾಮಾನ್ಯ ಅರ್ಹತೆ</td><td colspan="6">1. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.<br>2.ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗಧಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು.<br>3.ದೈಹಿಕ ಅಂಗವಿಕಲ ಮೀಸಲಾತಿಯಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿ, ನಿಗಧಿತ ಪ್ರಾಧಿಕಾರದಿಂದ ನಿಗದಿಪಡಿಸಲಾದ ಕೊನೆಯ ದಿನಾಂಕದೊಳಗೆ ಅಂಗವಿಕಲ ಪ್ರಮಾಣ ಪತ್ರ ಪಡೆದಿರಬೇಕು.<br>ವಿದ್ಯಾರ್ಥಿನಿಲಯ / ಕ್ರೈಸ್ ವಿದ್ಯಾರ್ಥಿನಿಲಯ / ಸಫಾಯಿ ಕರ್ಮಚಾರಿ ಮೀಸಲಾತಿ ಅಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರ ಪಡೆದಿರಬೇಕು.</td></tr>
<tr><td>06</td><td>ವಾರ್ಷಿಕ ಆದಾಯ</td><td colspan="6">ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ರೂ.5.00 ಲಕ್ಷ ಮೀರಿರಬಾರದು.</td></tr>
</table>

<table>
<tr>
<td>07</td>
<td>ಆಯ್ಕೆ ವಿಧಾನ</td>
<td colspan="2">• ಅಭ್ಯರ್ಥಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆ.ಇ.ಎ) ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ.<br>• ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ಆನ್-ಲೈನ್ ಕೌನ್ಸಿಲಿಂಗ್ ಮೂಲಕ ಅಭ್ಯರ್ಥಿಗಳನ್ನು ತರಬೇತಿ ಸಂಸ್ಥೆಗೆ ನಿಯೋಜಿಸಲಾಗುತ್ತದೆ.</td>
</tr>
<tr>
<td>09</td>
<td>ಶಿಷ್ಯವೇತನ<br>(ಮಾಸಿಕ)</td>
<td>ಯು.ಪಿ.ಎಸ್.ಸಿ ತರಬೇತಿ<br>ದೆಹಲಿ – 10,000/-<br>ಹೈದರಾಬಾದ್ – 8,000/-<br>ಬೆಂಗಳೂರು – 6,000/-<br>ಇತರೆ ಸ್ಥಳಗಳು – 5,000/-</td>
<td>ಕೆ.ಎ.ಎಸ್ – 4,000/-<br>ಬ್ಯಾಂಕಿಂಗ್/ಗ್ರೂಪ್-ಸಿ/ ಎಸ್.ಎಸ್.ಸಿ/ಆರ್.ಆರ್.ಬಿ/ ನ್ಯಾಯಾಂಗ ಸೇವೆ ತರಬೇತಿ – 3,000/-</td>
</tr>
<tr>
<td colspan="4">ಸರ್ಕಾರದ ಆದೇಶದ ಪ್ರಕಾರ ಶಿಷ್ಯವೇತನವನ್ನು ಮೂರು ಮಾಹೆಗೆ ಒಂದು ಬಾರಿ ತರಬೇತಿ ಸಂಸ್ಥೆಯವರು ಸಲ್ಲಿಸುವ ಹಾಜರಾತಿಯನ್ವಯ ಪಾವತಿಸಲಾಗುವುದು. ಆದರೆ ತರಬೇತಿ ಅವಧಿಯಲ್ಲಿ ಯಾವುದೇ ವಸತಿ ಸೌಲಭ್ಯವನ್ನು ಇಲಾಖಾವತಿಯಿಂದ ನೀಡಲಾಗುವುದಿಲ್ಲ.</td>
</tr>
<tr>
<td>10</td>
<td>ಅರ್ಜಿ ಸಲ್ಲಿಸಲು ವೆಬ್‌ಸೈಟ್ ವಿಳಾಸ</td>
<td colspan="2">www.sw.kar.nic.in</td>
</tr>
<tr>
<td>11</td>
<td>ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ</td>
<td colspan="2">20.09.2022</td>
</tr>
<tr>
<td>12</td>
<td>ಅಭ್ಯರ್ಥಿಗಳ ಗುರಿ</td>
<td colspan="2">
<table>
<tr><th>ಸ್ಪರ್ಧಾತ್ಮಕ ಪರೀಕ್ಷೆ</th><th>ಅಭ್ಯರ್ಥಿಗಳ ಗುರಿ</th></tr>
<tr><td>UPSC</td><td>577</td></tr>
<tr><td>KAS</td><td>695</td></tr>
<tr><td>Group-C</td><td>1900</td></tr>
<tr><td>Banking</td><td>1900</td></tr>
<tr><td>RRB</td><td>1755</td></tr>
<tr><td>SSC</td><td>1755</td></tr>
<tr><td>Judiciary Services</td><td>270</td></tr>
<tr><td>Total</td><td>8852</td></tr>
</table>
</td>
</tr>
</table>